ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 22–9–2014

## ಪತ್ರಿಕಾ ಪ್ರಕಟಣೆ

## ಕ್ರಿಯಾ ಯೋಜನೆಗೆ ಅಂತಿಮ ರೂಪ ನೀಡಿ ಶೀಘ್ರ ಹಣ ಬಿಡುಗಡೆ

– ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಶೇಕಡಾ 24.1 ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನಸಂಖ್ಯೆಯಿದ್ದು ಜನಸಂಖ್ಯೆಗೆ ಅನುಗುಣವಾಗಿ ರೂ 15,834.16 ಕೋಟಿ ಈ ಸಮುದಾಯದ ಕಲ್ಯಾಣ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾಗುವುದು ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಿಧಾನಸೌಧದಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಅನುಸೂಚಿತ ಜಾತಿಗಳು ಹಾಗೂ ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಸಭೆಯ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಮುಖ್ಯಮಂತ್ರಿಯವರು ರಾಜ್ಯದ ಎಸ್‌ಸಿ/ಎಸ್‌ಟಿ ವರ್ಗದ ಜನಸಂಖ್ಯೆಗೆ ಅನುಗುಣವಾಗಿ ಹಣ ವಿಯೋಗಿಸಲು ಸಿದ್ಧಪಡಿಸಲಾಗಿದ್ದ ಕ್ರಿಯಾ ಯೋಜನೆಯಲ್ಲಿ ಕೆಲವೊಂದು ಮಾರ್ಪಾಡುಗಳನ್ನು ತಂದು ಇನ್ನು 2 ವಾರಗಳಲ್ಲಿ ಈ ಕ್ರಿಯಾ ಯೋಜನೆಗೆ ಅಂತಿಮ ರೂಪ ನೀಡಲಾಗುವುದು ಎಂದರು.

ಈ ಸಮುದಾಯಗಳ ಆರ್ಥಿಕ ಮತ್ತು ಸಾಮಾಜಿಕ ಬದ್ಧತೆ ದೃಷ್ಟಿಯಿಂದ ಆದ್ಯತಾ ಕ್ಷೇತ್ರಗಳಾದ ವಸತಿ, ಶಿಕ್ಷಣ, ನೀರಾವರಿ, ಉದ್ಯೋಗ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಹಣವನ್ನು ವಿನಿಯೋಗಿಬೇಕು ಎಂದ ಅವರು, ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಪಂಗಡಗಳ ಉಪಯೋಜನೆ ಅಧಿನಿಯಮ ಜಾರಿಗೆ ಬಂದಿದ್ದು ಅಭಿವೃದ್ಧಿ ಪರಿಷತ್ತಿನ ಸಭೆ ನಡೆದಿದ್ದು, ಆದಷ್ಟು ಬೇಗ ಕ್ರಿಯಾ ಯೋಜನೆಯನ್ನು ಅಂತಿಮಗೊಳಿಸಿ ಇನ್ನೂ 6 ತಿಂಗಳಲ್ಲಿ ಈ ಯೋಜನೆಯಡಿ ಮೀಸಲಿರುವ ಹಣವನ್ನು ಖರ್ಚು ಮಾಡಲಾಗುವುದು. ಈ ಕಾಯ್ದೆ 2014 ರ ಏಪ್ರಿಲ್ ನಿಂದ ಜಾರಿಗೆ ಬಂದಿದ್ದು ದೇಶದಲ್ಲಿ ಈ

ಕಾಯ್ದೆ ಜಾರಿಗೆ ತಂದ 2ನೇ ರಾಜ್ಯದ ನಮ್ಮದಾಗಿದೆ. ನಾವು ತಂದಿರುವ ಈ ಕಾಯ್ದೆ ಹೆಚ್ಚು ಪರಿಣಾಕಾರಿ ಹಾಗೂ ಪ್ರಗತಿಪರ ಕಾಯ್ದೆಯಾಗಿದೆ ಎಂದರು.

ಈ ಯೋಜನೆಯಡಿ ಮೀಸಲಿರುವ ಹಣ ಖರ್ಚು ಮಾಡಬೇಕು. ಅಧಿಕಾರಿಗಳು ಈ ಯೋಜನೆ ಜಾರಿಗೆ ತರಲು ಮತ್ತು ಹಣ ಖರ್ಚುಮಾಡಲು ನಿರ್ಲಕ್ಷ ತೋರಿದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಮಿತಿಯ ಉಪಾಧ್ಯಕ್ಷರು ಹಾಗೂ ಸಮಾಜಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ, ಕಾನೂನು ಸಚಿವ ಶ್ರೀ ಟಿ.ಬಿ. ಜಯಚಂದ್ರ, ಸಂಸದ ಶ್ರೀ ಧ್ರುವ ನಾರಾಯಣ, ಶಾಸಕರುಗಳಾದ ಗೋವಿಂದ ಕಾರಜೋಳ, ರಾಜಣ್ಣ ಸಿ.ಎಸ್. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ಲತಾ ಕೃಷ್ಣರಾವ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ನರಸಿಂಹರಾಜು ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಉನ್ನತ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

ಸಮ:ಜಿಪಿಆರ್.